ಇ) ಹಾಗಿದ್ದಲ್ಲಿ ಆ ಯೋಜನೆಗಳು ಯಾವುವು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಸಾಮಾಜಿಕ ಉತ್ಪಾದನಾ ಕಾರ್ಯದ ಅಂಗವಾಗಿ ಇವುಗಳನ್ನು ಸಾಂಕೇತಿಕವಾಗಿ ಕೆಲವು ಶಾಲೆಗಳಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಕರ್ನಾಟಕ ವಿಶ್ವವಿದ್ಯಾನಿಲಯಗಳ ಶಾಸನಗಳ ತಿದ್ದುಪಡಿ

4650 - ಶ್ರೀ ಮೋಹನ್ ಪಿ.ಸಿ. (ಚಿಕ್ಕಪೇಟೆ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಿಶ್ವವಿದ್ಯಾನಿಲಯಗಳ ಶಾಸನವು ಬಹಳ ಹಳೆಯದಾಗಿದ್ದು, ಹಲವಾರು ನ್ಯೂನತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಶಾಸನಕ್ಕೆ ತಿದ್ದುಪಡಿ ತರಲು ಸರ್ಕಾರದವರು ಪರಿಶೀಲಿಸುವರೆ?

ಡಾ|| ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) 1976ರ ಕೆ.ಎಸ್.ಯು. ಅಧಿನಿಯಮದ 61ನೇ ಪ್ರಕರಣದಡಿ ನಿಹಿತವಾದ ಅಧಿಕಾರವನ್ನು ಚಲಾಯಿಸಿ ಕುಲಾಧಿಪತಿಗಳು ಪ್ರೊ.ಟಿ. ನವನೀತರಾವ್ ರವರ ಅಧ್ಯಕ್ಷತೆಯಲ್ಲಿ ವಿಶ್ವವಿದ್ಯಾಲಯ ಪರಾಮಾರ್ಶಿತ ಆಯೋಗವನ್ನು ದಿನಾಂಕ 01-04-92 ರಂದು ಸ್ಥಾಪಿಸಿದ್ದರು. ಆಯೋಗವು ದಿನಾಂಕ 01-03-94ರಂದು ನಿರ್ದಿಷ್ಟ ಶಿಫಾರಸ್ಸಿನೊಂದಿಗೆ ತನ್ನ ವರದಿಯನ್ನು ಸಲ್ಲಿಸಿತ್ತು. ಕೆಲವು ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು 1976ರ ಕೆ.ಎಸ್.ಯು. ಅಧಿನಿಯಮವನ್ನು ತಿದ್ದುಪಡಿ ಮಾಡಬೇಕಾಗಿದೆ. ಅಂತರ ವಿಶ್ವವಿದ್ಯಾಲಯ ಮಂಡಳಿಯ ಶಿಫಾರಸ್ಸನ್ನು ಸಹ ಗಣನೆಗೆ ತೆಗೆದುಕೊಂಡು, ಸದರಿ ಅಧಿನಿಯಮಕ್ಕೆ ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ.

ಬಸವಕಲ್ಯಾಣ ತಾಲ್ಲೂಕಿನಲ್ಲಿ ಭಾಷಾ ಅಲ್ಪಸಂಖ್ಯಾತರ ಶಿಕ್ಷಕರು

4651 - ಶ್ರೀ ಎ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿನಲ್ಲಿ ಸರ್ಕಾರ ಗುರುತಿಸಿರುವ ಭಾಷಾ ಅಲ್ಪಸಂಖ್ಯಾತರ ಶಾಲೆಗಳ ಸಂಖ್ಯೆ ಎಷ್ಟು? (ಮರಾಠಿ ಹಾಗೂ ಉರ್ದು ಭಾಷೆಗಳನ್ನೊಳಗೊಂಡಂತೆ ಗ್ರಾಮವಾರು ಹಾಗೂ ಶಾಲೆವಾರು ವಿವರ)